ದೂರವಾಣಿ ಸಂಖ್ಯೆ : 2419677/2419361
ಫ್ಯಾಕ್ಸ್: 0821-2419363/2419301
e-mail : registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ : 1916

ವಿಶ್ವವಿದ್ಯಾನಿಲಯ ಕಾರ್ಯಸೌಧ,
ಕ್ರಾಫರ್ಡ್ ಭವನ, ಮೈಸೂರು-570005

ಎಸಿ2(ಎಸ್)/34/90-91

ದಿನಾಂಕ: 22.12.2012

## ಅಧಿಸೂಚನೆ

ವಿಷಯ: Double the duration ಆದ ನಂತರ ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪರೀಕ್ಷೆ ಬರೆಯಲು ಪುನಃ ಅವಕಾಶ ನೀಡುವ ಬಗ್ಗೆ.

ಉಲ್ಲೇಖ: 1) ಈ ಕಛೇರಿಯ ಇದೇ ಸಮ ಸಂಖ್ಯೆಯ ದಿನಾಂಕ 10.12.2008 ರ ಪ್ರಕಟಣೆ
2) ದಿನಾಂಕ 07.12.2012 ರಂದು ನಡೆದ ಶಿಕ್ಷಣ ಮಂಡಳಿ ಸಭೆಯ ನಿರ್ಣಯ.

*****

ಎಲ್ಲಾ ಸ್ನಾತಕ ಮತ್ತು ಸ್ನಾತಕೋತ್ತರ ಪದವಿ ಕೋರ್ಸುಗಳು (ಬಿ.ಇಡಿ. ಹಾಗೂ ಕಾನೂನು ಪದವಿಯ R.R., CSS ಮತ್ತು ISS Scheme ಸೇರಿದಂತೆ) ಮತ್ತು ಡಿಪ್ಲೊಮಾ ಕೋರ್ಸುಗಳಿಗೆ ಅನ್ವಯವಾಗುವಂತೆ Double the duration ಆದ ನಂತರ ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ **One time measure** ಎಂದು ಪರಿಗಣಿಸಿ, ಜೂನ್ 2013 ರಿಂದ ಜೂನ್ 2014 ರವರೆಗೆ ನಡೆಯುವ ಮೂರು ಪರೀಕ್ಷೆಗಳನ್ನು ಪ್ರಸ್ತುತ ಜಾರಿಯಲ್ಲಿರುವ ಪಠ್ಯಕ್ರಮದನ್ವಯ ಅನುಸರಿಸಿ ಬರೆಯಲು ಅವಕಾಶ ಕಲ್ಪಿಸಲಾಗಿದೆ ಎಂದು ಈ ಮೂಲಕ ಪ್ರಕಟಿಸಲಾಗಿದೆ.

ಈ ರೀತಿ ಪುನಃ ಮೂರು ಅವಕಾಶಗಳನ್ನು ಪಡೆದು ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳಿಗೆ ಇನ್ನು ಮುಂದೆ ಯಾವುದೇ ಕಾರಣಕ್ಕೂ ಹೆಚ್ಚಿನ ಅವಕಾಶಗಳನ್ನು ನೀಡಲಾಗುವುದಿಲ್ಲ ಎಂದೂ ಸಹ ಈ ಮೂಲಕ ತಿಳಿಸಲಾಗಿದೆ. ಈ ಅಧಿಸೂಚನೆಯಲ್ಲಿ ನೀಡಲಾಗಿರುವ ಹೆಚ್ಚುವರಿ ಅವಕಾಶಕ್ಕೆ ಪರೀಕ್ಷಾ ಶುಲ್ಕವು ಸಾಮಾನ್ಯ ಪರೀಕ್ಷಾ ಶುಲ್ಕದ ನಾಲ್ಕು ಪಟ್ಟು ಆಗಿರುತ್ತದೆಂದು ಸಹಾ ತಿಳಿಯಪಡಿಸಲಾಗಿದೆ.

ಗೌರವ ಕುಲಪತಿಯವರ ಅನುಮೋದನೆಯನ್ವಯ

ಕುಲಸಚಿವ

ಇವರಿಗೆ:

1. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳಿಗೆ- ಇದನ್ನು ಸಂಬಂಧಿಸಿದ ವಿದ್ಯಾರ್ಥಿಗಳ ಗಮನಕ್ಕೆ ತರಬೇಕಾಗಿ ಕೋರಿದೆ.
2. ಕುಲಸಚಿವರು (ಪರೀಕ್ಷಾಂಗ), ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಎಲ್ಲಾ ವಿಭಾಗಗಳ ಮುಖ್ಯಸ್ಥರುಗಳಿಗೆ, ಮಾನಸಗಂಗೋತ್ರಿ, ಮೈಸೂರು.
4. ನಿರ್ದೇಶಕರು/ಸಂಯೋಜಕರು-ಸ್ನಾತಕೋತ್ತರ ಕೇಂದ್ರ-ಮಂಡ್ಯ/ಹಾಸನ/ಚಾಮರಾಜನಗರ,ಮೈವಿವಿ, ಮೈಸೂರು.
5. ಎಲ್ಲಾ ನಿಕಾಯಗಳ ಡೀನರುಗಳಿಗೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
6. ನಿರ್ದೇಶಕರು, ಪಿ.ಎಂ.ಇ.ಬಿ./ಕಾಲೇಜು ಅಭಿವೃದ್ಧಿ ಮಂಡಳಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
7. ನಿರ್ದೇಶಕರು, ಸಿ.ಎಫ್.ಟಿ.ಆರ್.ಐ./ಡಿ.ಎಫ್.ಆರ್.ಎಲ್./ಎ.ಐ.ಐ.ಎಸ್.ಹೆಚ್./ಸಿ.ಎಸ್.ಆರ್.ಟಿ.ಐ., ಮೈಸೂರು.
8. ಪ್ರೊ.ಹೇಮಂತ್ ಕುಮಾರ್, ಅಧ್ಯಕ್ಷರು, ಗಣಕ ವಿಜ್ಞಾನ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು – ಈ ಅಧಿಸೂಚನೆಯನ್ನು ವಿದ್ಯಾರ್ಥಿಗಳ ಹಾಗೂ ಸಾರ್ವಜನಿಕರ ಮಾಹಿತಿಗಾಗಿ ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಹಾಕಬೇಕೆಂದು ಕೋರಿದೆ.
9. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು
10. ಡಾ.ಎಂ.ಎಸ್.[illegible], ಸಂಖ್ಯಾಶಾಸ್ತ್ರಜ್ಞರು, ಪರೀಕ್ಷಾ ವಿಭಾಗ, ಮೈವಿವಿ, ಮೈಸೂರು
11. ಉಪ/ಸಹಾಯಕ ಕುಲಸಚಿವರು, ಶೈಕ್ಷಣಿಕ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
12. ಉಪ/ಸಹಾಯಕ ಕುಲಸಚಿವರು, ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
13. ಅಧೀಕ್ಷಕರು, ಶೈಕ್ಷಣಿಕ ವಿಭಾಗ-1 ಮತ್ತು 2 ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
14. ಶೈಕ್ಷಣಿಕ ವಿಭಾಗದ ಎಲ್ಲಾ ಕಾರ್ಯನಿರ್ವಾಹಕರುಗಳಿಗೆ, ಆಡಳಿತ ಶಾಖೆ, ಮೈವಿವಿ, ಮೈಸೂರು

# ಮೈಸೂರು ವಿಶ್ವವಿದ್ಯಾನಿಲಯ

ಸಂಖ್ಯೆ: ಪವಿ/ಕಿ.6/07/ಅಧಿಸೂಚನೆ/2010-11

ಕುಲಸಚಿವ (ಪರೀಕ್ಷಾಂಗ) ರವರ ಕಛೇರಿ,
ವಿಶ್ವವಿದ್ಯಾನಿಲಯ ಕಾರ್ಯಸೌಧ,
ಕ್ರಾಫರ್ಡ್‌ಭವನ ಮೈಸೂರು-570 005.
ದಿನಾಂಕ : **23-03-2013.**

## ಅ ಧಿ ಸೂ ಚ ನೆ

ವಿಷಯ: ಮೇ/ಜೂನ್ 2013ರಲ್ಲಿ ನಡೆಯಲಿರುವ ಪದವಿ ಪರೀಕ್ಷೆಗಳ ಬಗ್ಗೆ.

ಉಲ್ಲೇಖ: 1. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು, ಇವರ ಅಧಿಸೂಚನೆ ಸಂಖ್ಯೆ: ಎಸಿ7/(ಎ)/420/2010-11 ದಿನಾಂಕ 28-06-2012.
2. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು, ಇವರ ಅಧಿಸೂಚನೆ ಸಂಖ್ಯೆ: ಎಸಿ2/(ಎಸ್)/382/2011-12, ದಿನಾಂಕ 11-06-2012.
3. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು, ಇವರ ಸುತ್ತೋಲೆ/ ಸಂಖ್ಯೆ/ಎಸಿ.6/125/2006-07 ದಿನಾಂಕ 31.12.2012.

*****

ಮೇ/ಜೂನ್ 2013ರ ಮಾಹೆಯಲ್ಲಿ ನಡೆಯಲಿರುವ ವಾರ್ಷಿಕ ಹಾಗೂ 1 ರಿಂದ 6ನೇ ಸೆಮಿಸ್ಟರ್‌ನ ಬಿ.ಎ., ಬಿ.ಎಸ್ಸಿ., ಬಿ.ಕಾಂ., ಬಿ.ಬಿ.ಎಂ, ಬಿ.ಎಸ್.ಡಬ್ಲ್ಯು., ಬಿ.ಎಸ್ಸಿ.,(F.C.Sc)., ಬಿ.ಸಿ.ಹೆಚ್., ಬಿ.ಎಸ್ಸಿ (ಹಾಲ್ ಮತ್ತು ಕ್ರಮಣ) ಬಿ.ಎಸ್.ಎಸ್., (H & I) ಬಿ.ಹೆಚ್.ಎಂ.,(ಬಿ.ಎಸ್.ಎಸ್. ಸ್ಕೀಂ), ಬಿ.ಸಿ.ಎ, ಬಿ.ಎಫ್.ಎ., ಬಿ.ಸಿ.ಎಸ್., ಮತ್ತು ಬಿ.ವಿ.ಎ. ಪದವಿಗಳ ಪರೀಕ್ಷೆಗಳು ದಿನಾಂಕ **16.05.2013 ರಿಂದ ಆರಂಭವಾಗಲಿವೆ.**

1. ಪರೀಕ್ಷಾ ವಿಭಾಗದಿಂದ ಕಾಲೇಜುಗಳಿಗೆ ಖಾಲಿ ಅರ್ಜಿ ಫಾರಂಗಳನ್ನು ಕಳುಹಿಸಲು ಕೊನೆಯ ದಿನಾಂಕ : **03.04.2013.**
2. ಪರೀಕ್ಷಾ ಶುಲ್ಕವನ್ನು ಪಾವತಿ ಮಾಡಲು ಮತ್ತು ಭರ್ತಿಮಾಡಿದ ಅರ್ಜಿಗಳನ್ನು ಕಾಲೇಜಿಗೆ ಸಲ್ಲಿಸಲು ಕೊನೆಯ ದಿನಾಂಕ : **17.04.2013**
3. ಬೇಡಿಕೆ ಹುಂಡಿ (DD) ಗಳನ್ನು ವಿಶ್ವವಿದ್ಯಾನಿಲಯಕ್ಕೆ ಕಳುಹಿಸಲು ಕೊನೆಯ ದಿನಾಂಕ : **24.04.2013**
4. ಆನ್‌ಲೈನ್ ಮೂಲಕ ಪರೀಕ್ಷಾ ಅರ್ಜಿಗಳನ್ನು ಕಾಲೇಜಿನವರು ಭರ್ತಿ ಮಾಡಲು ಕೊನೆ ದಿನಾಂಕ (ಅರ್ಜಿಗಳು ಬಂದಂತೆ ಆ ದಿನವೇ ದಾಖಲಿಸುವುದು, ದಾಖಲಿಸಿದ ಮಾಹಿತಿಯನ್ನು ಪರಿಶೀಲಿಸಿದ ನಂತರ ದಿನಾಂಕ 24.04.2013 ರಂದು lock ಮಾಡುವುದು) : **24.04.2013**
5. ಪ್ರವೇಶ ಪತ್ರಗಳನ್ನು ಮುದ್ರಿಸಿಕೊಂಡು ವಿಶ್ವವಿದ್ಯಾನಿಲಯ ಅನುಮೋದನೆ ಪಡೆಯಲು ಕೊನೆಯ ದಿನಾಂಕ (ಆನ್‌ಲೈನ್ ಮೂಲಕ ಅಭ್ಯರ್ಥಿಗಳ ಪಟ್ಟಿಯನ್ನು ಮುದ್ರಿಸಿ ಪ್ರಾಂಶುಪಾಲರ ಸಹಿ ಪಡೆದು ಒಂದು ಪ್ರತಿಯನ್ನು ಪ್ರವೇಶ ಪತ್ರಗಳ ಜೊತೆಯಲ್ಲಿ ಕುಲಸಚಿವ (ಪರೀಕ್ಷಾಂಗ) ಅವರಿಗೆ ಸಲ್ಲಿಸಬೇಕು) : **08.05.2013**
6. ಆನ್‌ಲೈನ್ ಮೂಲಕ **IA** ಅಂಕಗಳನ್ನು ಎಂಟ್ರಿ ಮಾಡಲು ಕೊನೆ ದಿನಾಂಕ (ದಾಖಲಿಸಿದ ಆಂತರಿಕ ಅಂಕಗಳನ್ನು ಪರಿಶೀಲಿಸಿದ ನಂತರ ದಿನಾಂಕ **15.05.2013** ರಂದು **lock** ಮಾಡುವುದು) : **10.05.2013**
7. IA ಅಂಕಗಳನ್ನು ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ದಿನಾಂಕ : **07.06.2013**
8. ವಿದ್ಯಾರ್ಥಿಗಳು ಅಂಕಗಳನ್ನು ವೆಬ್‌ಸೈಟ್‌ನಲ್ಲಿ ಪರಿಶೀಲಿಸಿದ ನಂತರ ತಿದ್ದುಪಡಿ ಇದ್ದಲ್ಲಿ ಪ್ರಾಂಶುಪಾಲರುಗಳು ಲಿಖಿತ ಮೂಲಕ ಅಹ್ವಾಲುಗಳನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ : **22.06.2013**
9. ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ ದಿನಾಂಕ : **16.05.2013**

**ಪ್ರಾಯೋಗಿಕ ಪರೀಕ್ಷೆಗಳನ್ನು ದಿನಾಂಕ : 22.04.2013 ರಿಂದ ಪ್ರಾರಂಭಿಸಿ ದಿನಾಂಕ : 11.05.2013 ರೊಳಗೆ ಮುಗಿಸಿಕೊಳ್ಳುವುದು. ಅನಿವಾರ್ಯ ಸಂದರ್ಭಗಳಲ್ಲಿ ಕುಲಸಚಿವ (ಪರೀಕ್ಷಾಂಗ), ಅವರ ಪೂರ್ವಾನುಮತಿಯೊಂದಿಗೆ ಪರೀಕ್ಷಾ ದಿನಾಂಕವನ್ನು ನಿರ್ಧರಿಸಬಹುದು.**

**ಎಲ್ಲಾ ಪದವಿ ವಿದ್ಯಾರ್ಥಿಗಳ ಆಂತರಿಕ ಮೌಲ್ಯಮಾಪನ ಅಂಕಗಳನ್ನು ಕಾಲೇಜಿನ ಇಂಟರ್‌ನೆಟ್ ಸೌಲಭ್ಯವನ್ನು ಬಳಸಿ ನೇರವಾಗಿ ವಿಶ್ವವಿದ್ಯಾನಿಲಯದ Web Serverಗೆ ಮಾಹಿತಿಯನ್ನು ವರ್ಗಾವಣೆ (Online Transmission) ಮಾಡುವಂತೆ ತಿಳಿಸಲಾಗಿದೆ. ಹಾಗೂ ಅನಿವಾರ್ಯ ಕಾರಣದಿಂದಾಗಿ ಕಾಲೇಜಿನಲ್ಲಿ ಇಂಟರ್‌ನೆಟ್ ಸೌಲಭ್ಯವಿಲ್ಲದಿದ್ದ ಪಕ್ಷದಲ್ಲಿ ಸ್ಥಳೀಯವಾಗಿ ಲಭ್ಯವಿರುವ ಯಾವುದೇ ಕಂಪ್ಯೂಟರ್ ಕೇಂದ್ರದಿಂದಲೂ ಮಾಹಿತಿ ರವಾನಿಸಬಹುದಾಗಿದೆ.**

## ಪರೀಕ್ಷಾ ಶುಲ್ಕಗಳ ದರಗಳು

| | | |
|---|---|---|
| 1. | **B.A./B.P.A./B.Com/BCS :** | |
| | a) I and II Year/ I, II, III & IV Semester whole Examination | Rs.450-00 |
| | Per paper with Practical | Rs.285-00 |
| | Per paper without Practical/Skill Development | Rs.225-00 |
| | b) III Year/ V & VI Semester whole Examination | Rs. 535-00 |
| | Per paper with Practical | Rs. 285-00 |
| | Per paper without Practical | Rs. 225-00 |
| 2. | **B.Sc./B.Sc. (Family & Community Science)/BCA :** | |
| | a) I and II Year/ I, II, III & IV Semester whole Examination | Rs. 510-00 |
| | Per paper with Practical | Rs. 285-00 |
| | Per paper without Practical | Rs. 225-00 |
| | b) III Year/ V & VI Semester whole Examination | Rs.565-00 |
| | Per paper with Practical | Rs.285-00 |
| | Per paper without Practical | Rs.225-00 |
| 3. | **B.F.A./B.B.M./B.S.W./B.Sc.(Speech & Hearing) & B.S.Ed (H & I) :** | |
| | Whole Examination (per semester) | Rs.675-00 |
| | Per paper with Practical | Rs.395-00 |
| | Per paper without Practical | Rs.225-00 |
| 4. | **B.T.H./B.H.M. :** | |
| | Whole Examination (per semester) | Rs. 1,295-00 |
| | Per paper with Practical | Rs. 395-00 |
| | Per paper without Practical | Rs. 225-00 |

***Subject to a maximum of whole examination Fee fixed per semester/Annual Scheme.***

**NOTE:** For Science subjects in Semester Scheme wherever Practical exemption is there, Examination fee is same as that of per paper without Practical/Skill Development.

ಅಂತಿಮ ಪದವಿ ಪರೀಕ್ಷೆಯ ವಿದ್ಯಾರ್ಥಿಗಳು ಪದವಿ ಪ್ರಮಾಣ ಪತ್ರಕ್ಕೆ (ಎಲ್ಲಾ ಪದವಿಗಳಿಗೆ) ಪ್ರತ್ಯೇಕವಾಗಿರುವ ಶುಲ್ಕ

| | | |
|---|---|---|
| ಅ) ಸಾಮಾನ್ಯ ವರ್ಗದವರಿಗೆ | : | Rs.735-00 |
| ಆ) ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ, ಕ್ಯಾಟಗರಿ-I ವರ್ಗದವರಿಗೆ | : | Rs.370-00 |

ದಿನಾಂಕ: 19-4-2001ರ ಸಿಂಡಿಕೇಟ್ ಸಭೆಯ ತೀರ್ಮಾನದಂತೆ, ಅಂತಿಮ ವರ್ಷದ/ಸೆಮಿಸ್ಟರ್ ಪರೀಕ್ಷೆಗೆ ಕುಳಿತುಕೊಳ್ಳುವ ವಿದ್ಯಾರ್ಥಿಗಳು (ರಿಪೀಟರ್ ವಿದ್ಯಾರ್ಥಿಗಳೂ ಸೇರಿದಂತೆ) ಪರೀಕ್ಷಾ ಶುಲ್ಕದ ಜೊತೆಗೆ ಪದವಿ ಪ್ರಮಾಣ ಪತ್ರಕ್ಕೆ (Degree Certificate) ಸಂಬಂಧಿಸಿದ ಶುಲ್ಕವನ್ನು ಕಡ್ಡಾಯವಾಗಿ ಪಾವತಿಸಬೇಕು. ಈಗಾಗಲೇ ಇದಕ್ಕಾಗಿ ಶುಲ್ಕ ಪಾವತಿಸಿದ್ದಲ್ಲಿ ಪುನಃ ಪಾವತಿಸಬೇಕಾಗಿಲ್ಲ.

**ಸೂಚನೆ:**

1. ಶುಲ್ಕ ಪಾವತಿಸಲು ನಿಗದಿಪಡಿಸಿರುವ ದಿನಾಂಕಗಳನ್ನು ಯಾವುದೇ ಕಾರಣಕ್ಕಾಗಿ ವಿಸ್ತರಿಸಲಾಗುವುದಿಲ್ಲ.
2. ಪ್ರತಿಯೊಬ್ಬ ಅಭ್ಯರ್ಥಿಯೂ ಪ್ರತಿಯೊಂದು ಸೆಮಿಸ್ಟರ್/ವರ್ಷದ ಪರೀಕ್ಷೆಗೆ ಮೇಲೆ ನಿಗದಿಪಡಿಸಿರುವ ಪರೀಕ್ಷಾ ಶುಲ್ಕದ ಜೊತೆಗೆ ಪರೀಕ್ಷೆಯ ಅಂಕಪಟ್ಟಿ ಶುಲ್ಕ **ರೂ.160-00**ನ್ನು ಸಹ ಪಾವತಿಸತಕ್ಕದ್ದು. ಪರೀಕ್ಷಾ ಅರ್ಜಿಗೆ ಪ್ರತ್ಯೇಕ ಶುಲ್ಕವಿರುವುದಿಲ್ಲ.
3. ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ, ಕ್ಯಾಟಗರಿ-I ಮತ್ತು ಪರೀಕ್ಷಾ ಶುಲ್ಕ ಪಾವತಿಯಿಂದ ವಿನಾಯಿತಿ ಪಡೆಯಲು ಅರ್ಹರಾದ ಇತರೆ ವರ್ಗಗಳಿಗೆ (ಸಾಮಾನ್ಯ ವರ್ಗದವರನ್ನು ಒಳಗೊಂಡಂತೆ) ಸೇರಿದ ಅಭ್ಯರ್ಥಿಗಳಿಗೆ ಅವರ ವಾರ್ಷಿಕ ವರಮಾನದ ಆಧಾರದ ಮೇಲೆ ಪರೀಕ್ಷಾ ಶುಲ್ಕ ಪಾವತಿಯಿಂದ ವಿನಾಯಿತಿ ನೀಡಲಾಗಿದೆ. ಆದರೂ ಅಂತಹ ಅಭ್ಯರ್ಥಿಗಳು ನಿಗದಿಪಡಿಸಿದಂತೆ ಅಂಕಪಟ್ಟಿ ಶುಲ್ಕವನ್ನು **ರೂ.160-00** ಗಳನ್ನು ಪಾವತಿಮಾಡಬೇಕು.
4. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ ಅವರ ಪತ್ರ ಸಂಖ್ಯೆ ಎಸಿ2/182/92-93 ದಿನಾಂಕ<u>15-10-1999</u>ರ ಪತ್ರದಲ್ಲಿ ತಿಳಿಸಿರುವ ರೀತ್ಯಾ ಪರಿಶಿಷ್ಟ ಜಾತಿ/ಪರಿಶಿಷ್ಟವರ್ಗ ಹಾಗೂ ಕ್ಯಾಟಗರಿ-Iರ ವರ್ಗದ ವಿದ್ಯಾರ್ಥಿಗಳು ತಮ್ಮ ಕೋರ್ಸನ್ನು ಮುಗಿಸಿದ ನಂತರ ರಿಪೀಟರ್ಸ್ ಆಗಿ ಪರೀಕ್ಷೆಗಳನ್ನು ತೆಗೆದುಕೊಂಡಲ್ಲಿ, ಅಂತಹ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕ ಮತ್ತು ಇತರ ಶುಲ್ಕಗಳನ್ನು ತಪ್ಪದೆ ವಸೂಲು ಮಾಡಬೇಕೆಂದು ತಿಳಿಸಲಾಗಿದೆ. ಆದುದರಿಂದ ಇಂತಹ ವಿದ್ಯಾರ್ಥಿಗಳು ಶುಲ್ಕವನ್ನು ತಪ್ಪದೆ ಪಾವತಿಸುವುದು.

. . . . . . 3

5. ಪಾವತಿಸಬೇಕಾದ ಒಟ್ಟು ಶುಲ್ಕಕ್ಕೆ ಕಮಿಷನ್ ಚಾರ್ಜ್‌ಗಳನ್ನು ಕಳೆದು ಬೇಡಿಕೆ ಹುಂಡಿಯನ್ನು (Demand Draft) ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಈ ಹೆಸರಿನಲ್ಲಿ ಸ್ಟೇಟ್ ಬ್ಯಾಂಕ್ ಆಫ್ ಮೈಸೂರು, ವಿಶ್ವವಿದ್ಯಾನಿಲಯ ಶಾಖೆ, ಮೈಸೂರು ಇಲ್ಲಿ ಸಂದಾಯವಾಗುವಂತೆ ಪಡೆಯಬೇಕು.
6. ವಿಶ್ವವಿದ್ಯಾನಿಲಯಕ್ಕೆ ಡಿ.ಡಿ. ಮುಖಾಂತರ ಹಣ ಸಂದಾಯಮಾಡುವ ಸಂದರ್ಭದಲ್ಲಿ ಸೆಮಿಸ್ಟರ್‌ವಾರು ಅಂಕಪಟ್ಟಿ ಶುಲ್ಕ, ಪರೀಕ್ಷಾ ಶುಲ್ಕ ಮತ್ತು ಪದವಿಪತ್ರ ಶುಲ್ಕವನ್ನು ಪ್ರತ್ಯೇಕವಾಗಿ ನಮೂದಿಸಿ ವಿವರಣೆಯೊಂದಿಗೆ ಸಲ್ಲಿಸಬೇಕು.
7. ಅಭ್ಯರ್ಥಿಗಳ ಪಟ್ಟಿಯ ಪ್ರತಿ ಪುಟದಲ್ಲಿ ಒಟ್ಟಾರೆ ಶುಲ್ಕವನ್ನು ಕ್ರೋಢೀಕರಿಸಿ ಅದನ್ನು ಮುಂದಿನ ಪುಟಕ್ಕೆ ಮುಂದುವರೆಸಿ ಕೊನೆ ಪುಟದಲ್ಲಿ ಒಟ್ಟಾರೆ ಸಂದಾಯವಾಗಬೇಕಿರುವ ಶುಲ್ಕವನ್ನು ನಮೂದಿಸಬೇಕು.
8. ಶುಲ್ಕವನ್ನು ನಗದು/ಚೆಕ್ ಇತ್ಯಾದಿಗಳ ಮೂಲಕ ಸ್ವೀಕರಿಸಲಾಗುವುದಿಲ್ಲ. ಆದರೆ ಅಭ್ಯರ್ಥಿಗಳಿಂದ ನಗದಾಗಿ ಪಡೆದ ಒಟ್ಟು ಶುಲ್ಕಕ್ಕೆ ಮೇಲೆ ತಿಳಿಸಿರುವ ದಿನಾಂಕದೊಳಗಾಗಿ ಬೇಡಿಕೆ ಹುಂಡಿಯನ್ನು (Demand Draft) ಪಡೆದು ಕುಲಸಚಿವ (ಪರೀಕ್ಷಾಂಗ) ಇವರಿಗೆ ಕಳುಹಿಸುವ ಜವಾಬ್ದಾರಿ ಕಾಲೇಜಿನ ಪ್ರಾಂಶುಪಾಲರಿಗೆ ಇರುತ್ತದೆ.
9. **ಪರೀಕ್ಷೆಗಳನ್ನು ರದ್ದುಪಡಿಸಿರುವ ಪರೀಕ್ಷಾ ಕೇಂದ್ರಗಳನ್ನು ಹೊರತುಪಡಿಸಿ ಆಯಾಯಾ ಕಾಲೇಜನ್ನೇ ಪರೀಕ್ಷಾ ಕೇಂದ್ರವನ್ನಾಗಿ ನಿಗದಿಪಡಿಸಲಾಗಿದೆ (ಅಡಕ 'ಅ') ಹಾಗೂ ಆಯಾಯಾ ಕಾಲೇಜಿನ ಪ್ರಾಂಶುಪಾಲರನ್ನು ಮುಖ್ಯ ಪರೀಕ್ಷಾ ಅಧೀಕ್ಷಕರನ್ನಾಗಿ ನೇಮಿಸಲಾಗಿದೆ. ಅದಕ್ಕೆ ಪ್ರತ್ಯೇಕ ಆದೇಶವನ್ನು ಹೊರಡಿಸಲಾಗುವುದಿಲ್ಲ.**

**ವಿಶೇಷ ಸೂಚನೆ:**

1. ವಿದ್ಯಾರ್ಥಿಗಳ ಪ್ರವೇಶ ಪತ್ರಗಳನ್ನು ಆಯಾಯಾ ಕಾಲೇಜಿನವರು ಪರೀಕ್ಷೆಗಳು ಪ್ರಾರಂಭವಾಗುವುದಕ್ಕೆ ಸಾಕಷ್ಟು ಮುಂಚಿತವಾಗಿ Online ಮೂಲಕ ಪಡೆದು, ಕುಲಸಚಿವ (ಪರೀಕ್ಷಾಂಗ) ಅವರ ಫ್ಯಾಸಿಮಿಲಿ ಹಾಕಿಸಿಕೊಳ್ಳಬೇಕು ಮತ್ತು ಕುಲಸಚಿವ(ಪ) ಅವರ ಫ್ಯಾಸಿಮಿಲಿ ಇಲ್ಲದೆ ಯಾವುದೇ ಕಾರಣಕ್ಕೂ ವಿದ್ಯಾರ್ಥಿಗಳನ್ನು ಪರೀಕ್ಷೆಗೆ ಕೂರಿಸಕೂಡದು.
2. ಪರೀಕ್ಷಾ ಶುಲ್ಕವನ್ನು ಕಟ್ಟಲು ಹೆಚ್ಚು ಕಾಲಾವಕಾಶ ನೀಡಿರುವುದರಿಂದ ವಿದ್ಯಾರ್ಥಿಗಳಿಗೆ ಸೂಕ್ತ ತಿಳುವಳಿಕೆ ನೀಡಿ, ದಿನಾಂಕ: **17.04.2013** ರೊಳಗೆ ಪರೀಕ್ಷಾ ಶುಲ್ಕವನ್ನು ಕಟ್ಟಬೇಕು. ಯಾವುದೇ ಕಾರಣಕ್ಕೂ ದಂಡಶುಲ್ಕದೊಡನೆ ಪರೀಕ್ಷಾಶುಲ್ಕ ಕಟ್ಟಲು ಹೆಚ್ಚುವರಿ ಕಾಲಾವಕಾಶ ನೀಡಲಾಗುವುದಿಲ್ಲ.
3. ವಿಶ್ವವಿದ್ಯಾನಿಲಯದ ಅಧಿಸೂಚನೆ ಸಂಖ್ಯೆ:ಎಸಿ.2(ಎಸ್)/34/90–91 ದಿನಾಂಕ 22.12.2012ರ ಪ್ರಕಾರ ವ್ಯಾಸಂಗ ಅವಧಿಯ ಎರಡುಪಟ್ಟು ಅವಧಿ ಮುಗಿಸಿರುವ ಅನುತ್ತೀರ್ಣ ವಿದ್ಯಾರ್ಥಿಗಳಿಗೆ **ಜೂನ್ 2013 ರಿಂದ ಜೂನ್ 2014** ರವರೆಗೆ ನಡೆಯುವ ಮೂರು ಪರೀಕ್ಷೆಗಳನ್ನು ಬರೆಯಲು ಅವಕಾಶ (one time measure) ಕಲ್ಪಿಸಲಾಗಿದೆ. ಈ ಹೆಚ್ಚುವರಿ ಅವಕಾಶಕ್ಕೆ ಪರೀಕ್ಷಾ ಶುಲ್ಕವು ಸಾಮಾನ್ಯ ಪರೀಕ್ಷಾ ಶುಲ್ಕದ ನಾಲ್ಕುಪಟ್ಟು ಆಗಿರುತ್ತದೆ (ಪ್ರತಿಯನ್ನು ಲಗತ್ತಿಸಿದೆ ಅಡಕ – 'ಆ').

**ವಿದ್ಯಾರ್ಥಿಗಳಿಗೆ ಸೂಚನೆಗಳು:**

1. ಲಿಖಿತ ಪರೀಕ್ಷೆಗಳಿಗಿಂತ ಮೊದಲೇ ವಾರ್ಷಿಕ ಹಾಗೂ ಸೆಮಿಸ್ಟರ್ ಪದ್ಧತಿಯ ಎಲ್ಲಾ ಸೆಮಿಸ್ಟರ್‌ಗಳ (ಅಂದರೆ 1 ರಿಂದ 6) ಪ್ರಾಯೋಗಿಕ ಪರೀಕ್ಷೆಗಳನ್ನು ನಡೆಸಲಾಗುವುದು. ಪ್ರಾಯೋಗಿಕ ಪರೀಕ್ಷೆಗಳಿಗೆ ಸಂಬಂಧಿಸಿದ ವಿವರವಾದ ವೇಳಾಪಟ್ಟಿಯನ್ನು ಸಂಬಂಧಪಟ್ಟ ಕಾಲೇಜಿನ ಮುಖ್ಯ ಪರೀಕ್ಷಾ ಅಧೀಕ್ಷಕರು / ಕಾಲೇಜುಗಳ ಪ್ರಾಂಶುಪಾಲರುಗಳು ಪ್ರಕಟಿಸುವರು.
2. ಲಿಖಿತ ಪರೀಕ್ಷೆಗಳಿಗೆ ಸಂಬಂಧಪಟ್ಟ ವಿವರವಾದ ವೇಳಾಪಟ್ಟಿಯನ್ನು ಈ ಕಛೇರಿಯಿಂದ ಮುಂದಿನ ದಿನಗಳಲ್ಲಿ ಕಳುಹಿಸಲಾಗುವುದು.
3. ಪರೀಕ್ಷೆ ತೆಗೆದುಕೊಳ್ಳುವ ವಿದ್ಯಾರ್ಥಿಗಳು (ಅನುತ್ತೀರ್ಣರಾಗಿ ಮತ್ತೆ ಪರೀಕ್ಷೆ ತೆಗೆದುಕೊಳ್ಳುವ ವಿದ್ಯಾರ್ಥಿಗಳೂ ಸಹ ಸೇರಿದಂತೆ) ನಿಗದಿಪಡಿಸಲಾಗಿರುವ ಕೊನೆಯ ದಿನಾಂಕ ಅಥವಾ ಅದಕ್ಕಿಂತ ಮುಂಚಿತವಾಗಿ ತಾವು ವ್ಯಾಸಂಗ ಮಾಡಿರುವ ಕಾಲೇಜುಗಳಲ್ಲಿಯೇ ಪರೀಕ್ಷಾ ಶುಲ್ಕವನ್ನು ಕಟ್ಟಬೇಕು ಮತ್ತು ಪರೀಕ್ಷೆಯ ಅಭ್ಯರ್ಥನಾ ಪತ್ರವನ್ನು ಸಹ ಸಲ್ಲಿಸಬೇಕು. *ವಿಶ್ವವಿದ್ಯಾನಿಲಯಕ್ಕೆ ನೇರವಾಗಿ ಸಲ್ಲಿಸುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.*
4. ಪರೀಕ್ಷೆಗಳನ್ನು ಮುಂದೂಡಬೇಕೆಂದು ಬರುವ ಯಾವ ಬಗೆಯ ಮನವಿಯನ್ನು ಯಾವುದೇ ಕಾರಣಕ್ಕೂ ಪುರಸ್ಕರಿಸಲಾಗುವುದಿಲ್ಲ.
5. ಅಂಕಗಳ ಮರು ಮೌಲ್ಯಮಾಪನಕ್ಕಾಗಿ ಅರ್ಜಿಯನ್ನು ಸಲ್ಲಿಸಿರುವ ವಿದ್ಯಾರ್ಥಿಗಳು ಪರೀಕ್ಷೆಗೆ ಶುಲ್ಕವನ್ನು ಪಾವತಿಮಾಡಲು ನಿಗದಿಪಡಿಸಿದ ಕಡೆಯ ದಿನಾಂಕದೊಳಗೆ ಪರೀಕ್ಷಾ ಶುಲ್ಕಗಳನ್ನು ಪಾವತಿಮಾಡಬೇಕು ಮತ್ತು ಅಭ್ಯರ್ಥನ ಪತ್ರವನ್ನು ಸಲ್ಲಿಸಬೇಕು.
6. ಪರೀಕ್ಷಾ ಶುಲ್ಕವನ್ನು ಯಾವ ಕಾರಣದಿಂದಲೂ ಮರುಪಾವತಿ ಮಾಡಲಾಗುವುದಿಲ್ಲ ಮತ್ತು ಅದನ್ನು ಮುಂದಿನ ಪರೀಕ್ಷೆಗಳಿಗೂ ಸರಿದೂಗಿಸಿಕೊಳ್ಳಲಾಗುವುದಿಲ್ಲ.
7. ವಿಳಂಬವಾಗಿ (ಟಿ.ಎ.ಎಲ್) ಫಲಿತಾಂಶ ಪ್ರಕಟವಾಗುವ ವಿದ್ಯಾರ್ಥಿಗಳಿಗೆ ಅವರ ಫಲಿತಾಂಶವು ತಲುಪಿದ ದಿನಾಂಕದಿಂದ 7 ದಿವಸಗಳ ಅವಧಿಯೊಳಗೆ ಯಾವುದೇ ರೀತಿಯ ದಂಡಶುಲ್ಕವಿಲ್ಲದೆ ಪರೀಕ್ಷಾ ಶುಲ್ಕ ಕಟ್ಟಲು ಅನುಮತಿ ಇರುತ್ತದೆ.
8. ಪ್ರತಿಯೊಬ್ಬ ವಿದ್ಯಾರ್ಥಿಯೂ ತನ್ನ ಇತ್ತೀಚಿನ ಭಾವಚಿತ್ರದ ಮೇಲೆ ಮಾರ್ಕರ್ ಸಹಿ ಮಾಡಿ "ವಿದ್ಯಾರ್ಥಿಯನ್ನು ಗುರುತಿಸಲಾಗಿದೆ", ಎಂದು ಬರೆಯಿಸಿ ಪ್ರಾಂಶುಪಾಲರಿಂದ ಸಹಿ ಮಾಡಿಸಿ ಅವರ ಪ್ರವೇಶ ಪತ್ರಿಕೆಗೆ ಅಂಟಿಸಿ ಪರೀಕ್ಷಾ ಅರ್ಜಿಯೊಂದಿಗೆ ಕಾಲೇಜಿಗೆ ನೀಡಬೇಕು.
9. **ಭಾವಚಿತ್ರವಿಲ್ಲದ ಪ್ರವೇಶಪತ್ರಗಳನ್ನು ಪರೀಕ್ಷಾ ಕೊಠಡಿಯಲ್ಲಿ ಹಾಜರುಪಡಿಸುವ ವಿದ್ಯಾರ್ಥಿಗಳಿಗೆ ಯಾವುದೇ ಕಾರಣಕ್ಕೂ ಕೇಂದ್ರದ ಪರೀಕ್ಷಾ ಮುಖ್ಯಾಧಿಕಾರಿಗಳು/ವಿಶ್ವವಿದ್ಯಾನಿಲಯದ ಅಧಿಕಾರಿಗಳು ಹಾಗೂ ಜಾಗೃತಾಧಿಕಾರಿಗಳು ಪರೀಕ್ಷೆ ತೆಗೆದುಕೊಳ್ಳಲು ಅನುಮತಿ ಕೊಡುವುದಿಲ್ಲ.**
10. ಎಲ್ಲಾ ವಿದ್ಯಾರ್ಥಿಗಳು ಪರೀಕ್ಷಾ ಅರ್ಜಿಯ ಜೊತೆಗೆ ತಾವು ಪರೀಕ್ಷೆ ತೆಗೆದುಕೊಂಡಿರುವ ಆಯಾ ಸೆಮಿಸ್ಟರ್/ವರ್ಷಕ್ಕೆ ಸಂಬಂಧಪಟ್ಟ ಪರೀಕ್ಷೆಗಳ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳನ್ನು ಮಾತ್ರ ಕಡ್ಡಾಯವಾಗಿ ಲಗತ್ತಿಸಬೇಕು.

....4

**ಪ್ರಾಂಶುಪಾಲರುಗಳಿಗೆ ಸಾಮಾನ್ಯ ಸೂಚನೆಗಳು:**

1) ಪರೀಕ್ಷಾ ಶುಲ್ಕಗಳನ್ನು ಕಟ್ಟಲು ಹಾಗೂ ಪರೀಕ್ಷೆ ತೆಗೆದುಕೊಳ್ಳುವುದಕ್ಕೆ ಬೇಕಾಗಿರುವ ಮಾಹಿತಿಯನ್ನು ವಿದ್ಯಾರ್ಥಿಗಳಿಂದ ಪಡೆಯಲು ಖಾಲಿ ಫಾರಂಗಳನ್ನು ಕಳುಹಿಸಲಾಗುವುದು. (ಪರೀಕ್ಷಾ ಅರ್ಜಿ ಫಾರಂಗಳು ನಿಮ್ಮಲ್ಲಿ ಲಭ್ಯವಿದ್ದಲ್ಲಿ ಅವುಗಳನ್ನೂ ಉಪಯೋಗಿಸಬಹುದು).

2) ಪರೀಕ್ಷೆ ತೆಗೆದುಕೊಳ್ಳುವ ವಿದ್ಯಾರ್ಥಿಗಳ ಮಾಹಿತಿಯನ್ನು Online ಮೂಲಕ ಎಂಟ್ರಿ ಮಾಡಿದ ನಂತರ ಕಾಲೇಜು ಹಂತದಲ್ಲಿಯೇ ಪ್ರವೇಶ ಪತ್ರಗಳನ್ನು ಮುದ್ರಿಸುವ ವ್ಯವಸ್ಥೆಯನ್ನು ಮಾಡಲಾಗುವುದು. ವಿದ್ಯಾರ್ಥಿಗಳ ಹಾಜರಾತಿ ಮತ್ತು ಪ್ರವೇಶಾತಿ ಅನುಮತಿಯನ್ನು ಪ್ರವೇಶಪತ್ರದಲ್ಲಿ ದೃಢೀಕರಿಸಿದ ನಂತರ ಕುಲಸಚಿವ (ಪರೀಕ್ಷಾಂಗ) ಅವರ ಮೇಲುಸಹಿಗಾಗಿ ಪರೀಕ್ಷೆ ಪ್ರಾರಂಭಕ್ಕಿಂತ ಮುಂಚಿತವಾಗಿ ಕಳುಹಿಸಬೇಕು.

3) ಪ್ರಾಯೋಗಿಕ ಪರೀಕ್ಷೆಗಳ ವೇಳಾಪಟ್ಟಿಯನ್ನು ನಿಗದಿಪಡಿಸುವಾಗ ಲಿಖಿತ ಪರೀಕ್ಷೆ ಮತ್ತು ಪ್ರಾಯೋಗಿಕ ಪರೀಕ್ಷೆ ಒಂದೇ ಸಮಯದಲ್ಲಿ ನಡೆಯದಂತೆ ನೋಡಿಕೊಳ್ಳುವುದು.

4) ಪ್ರಾಯೋಗಿಕ ಪರೀಕ್ಷೆಗಳ ಅಂಕಪಟ್ಟಿಗಳನ್ನು ಮೊಹರುಮಾಡಿದ ಕವರುಗಳಲ್ಲಿ ಆಯಾ ಕೇಂದ್ರದಲ್ಲಿ ನಡೆಯುವ ಎಲ್ಲಾ ವಿಷಯಗಳ ಪ್ರಾಯೋಗಿಕ (ಲಿಖಿತ ಪರೀಕ್ಷೆಗಳು ಪ್ರಾರಂಭವಾಗುವ ಮುನ್ನ) ಪರೀಕ್ಷೆಗಳು ಮುಗಿದ ಮಾರನೇ ದಿವಸ ಕಳುಹಿಸಬೇಕು. ಈ ದಿನಾಂಕ ಮೀರಿ ಪ್ರಾಯೋಗಿಕ ಪರೀಕ್ಷೆಗಳ ಅಂಕಪಟ್ಟಿಗಳನ್ನು ಕಳುಹಿಸುವಂತಹ ಕಾಲೇಜುಗಳಿಗೆ/ಸಂಸ್ಥೆಗಳಿಗೆ ಸೇರಿದ ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶಗಳು ತಡವಾಗಿ ಪ್ರಕಟವಾಗುವ ಸಂಭವವನ್ನು ತಪ್ಪಿಸಲು ಜಾಗರೂಕರಾಗಿರಲು ಕೋರಲಾಗಿದೆ. ಉತ್ತರ ಪತ್ರಿಕೆಗಳ ಕಟ್ಟುಗಳಲ್ಲಿ (Answer Book Bundles) ಅಂಕಪಟ್ಟಿಗಳನ್ನು ಕಳುಹಿಸಬಾರದೆಂದು ಸೂಚಿಸಲಾಗಿದೆ. ಅಂಕಪಟ್ಟಿಗಳನ್ನು ತಯಾರಿಸುವಾಗ ವಿದ್ಯಾರ್ಥಿಯ ನೋಂದಣಿ ಸಂಖ್ಯೆಯನ್ನು (Register Number) ಪೂರ್ಣವಾಗಿ ಬರೆಯಬೇಕೆಂಬ ವಿಚಾರವನ್ನು ಎಲ್ಲಾ ಪ್ರಾಯೋಗಿಕ ಅಂಕಗಳ ಪಟ್ಟಿಯನ್ನು ಪ್ರಾಯೋಗಿಕ ಪರೀಕ್ಷಕರಿಗೆ ತಿಳಿಸಬೇಕು ಹಾಗೂ ಸಂಬಂಧಪಟ್ಟ ಪ್ರಾಯೋಗಿಕ ಪತ್ರಿಕೆಯ ನಿಖರವಾದ ಕೋಡ್ ನಂಬರನ್ನು ತಪ್ಪದೆ ಬರೆಯಬೇಕೆಂಬ ವಿಚಾರವನ್ನು ಸಹ ಪ್ರಾಯೋಗಿಕ ಪರೀಕ್ಷಕರಿಗೆ ತಿಳಿಸಬೇಕು. ಪ್ರಾಯೋಗಿಕ ಪರೀಕ್ಷಕರಿಗೆ ಪ್ರಾಯೋಗಿಕ ಅಂಕಗಳ ಪಟ್ಟಿಯನ್ನು (Marks List) ಒದಗಿಸುವುದಕ್ಕಿಂತ ಮೊದಲು ಆಯಾಯಾ ಕೇಂದ್ರದ ಮೊಹರನ್ನು (Seal) ಮಾರ್ಕ್ಸ್ ಲಿಸ್ಟ್‌ನ ಕೆಳಗಡೆ ಮಧ್ಯಭಾಗದಲ್ಲಿ ತಪ್ಪದೆ ಹಾಕಬೇಕು.

5) ಸಿದ್ಧಾಂತಿಯ ಪತ್ರಿಕೆಗಳನ್ನು ಕಾಲೇಜು ಹಂತದಲ್ಲೇ ಮೌಲ್ಯಮಾಪನ ಮಾಡಿಸಿ (ವಾರ್ಷಿಕ ಪರೀಕ್ಷೆಯ ಪತ್ರಿಕೆಯನ್ನು ಹೊರತುಪಡಿಸಿ ಮತ್ತು ಕೆ.ಪಿ.ಕೋಡ್ 42253 – ಕಂಪ್ಯೂಟರ್ ಅಪ್ಲಿಕೇಷನ್ ಪತ್ರಿಕೆ ಹೊರತುಪಡಿಸಿ) ಆನ್‌ಲೈನ್ ಮೂಲಕ ಅಂಕಗಳನ್ನು ಸಲ್ಲಿಸಿ, ಮೌಲ್ಯಮಾಪಕರು ನೀಡಿದ ಅಂಕಪಟ್ಟಿಯನ್ನು ಹಾಗೂ ಮೌಲ್ಯಮಾಪನಗೊಂಡ ಉತ್ತರಪತ್ರಿಕೆಗಳನ್ನು ಪ್ರತ್ಯೇಕವಾಗಿ ಮೊಹರುಮಾಡಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಬೇಕು.

ಕರಡು ಕು ಸಚಿವ (ಪರೀಕ್ಷಾಂಗ)
ಅವರಿಂದ ಅನುಮೋದಿಸಲ್ಪಟ್ಟಿದೆ.

ಕುಲಸಚಿವ (ಪರೀಕ್ಷಾಂಗ)

ಗೆ:

1. ಮೈಸೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಗೆ ಬರುವ ಮೈಸೂರು, ಮಂಡ್ಯ, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳ ಎಲ್ಲಾ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳು/ನಿರ್ದೇಶಕರು, ವಾಕ್ ಮತ್ತು ಶ್ರವಣ ಸಂಸ್ಥೆ, ಮಾನಸಗಂಗೋತ್ರಿ, ಮೈಸೂರು/ಜೆ.ಎಸ್.ಎಸ್. ಕಾಲೇಜು ವಾಕ್ ಮತ್ತು ಶ್ರವಣ ಸಂಸ್ಥೆ, ಜೆ.ಎಸ್.ಎಸ್ ಕಾಲೇಜು ಆವರಣ, ಊಟಿ ರಸ್ತೆ, ಮೈಸೂರು.
2. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು-570 005.
3. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಜಿಲ್ಲಾಧಿಕಾರಿಗಳ ಕಛೇರಿ, ಹಿಂದುಳಿದ ಮತ್ತು ಅಲ್ಪಸಂಖ್ಯಾತರ ಇಲಾಖೆ, ಮೈಸೂರು/ಮಂಡ್ಯ/ಹಾಸನ/ಚಾಮರಾಜನಗರ ಜಿಲ್ಲೆ.
5. ಜಿಲ್ಲಾ ಖಜಾನಾಧಿಕಾರಿಗಳು,ಮೈಸೂರು/ಮಂಡ್ಯ/ಹಾಸನ/ ಚಾಮರಾಜನಗರ.
6. ಆರಕ್ಷಕ ಅಧೀಕ್ಷಕರು, ಮೈಸೂರು/ಮಂಡ್ಯ/ಹಾಸನ/ ಚಾಮರಾಜನಗರ.
7. ನಿರ್ದೇಶಕರು, ವಿಶ್ವವಿದ್ಯಾನಿಲಯ ಮುದ್ರಣಾಲಯ, ಮಾನಸಗಂಗೋತ್ರಿ, ಮೈಸೂರು
8. ಜಿಲ್ಲಾ ವಾರ್ತಾ ಮತ್ತು ಪ್ರಚಾರ ಅಧಿಕಾರಿ, ವಾರ್ತಾ ಭವನ, ಎಚ್.ಸಿ.ದಾಸಪ್ಪ ವೃತ್ತ, ಮೈಸೂರು – ಮೇಲ್ಕಂಡ ಪ್ರಕಟಣೆ ಮುಖ್ಯಾಂಶಗಳನ್ನು ಎಲ್ಲಾ ದಿನಪತ್ರಿಕೆಗಳಲ್ಲಿ ಉಚಿತವಾಗಿ ಪ್ರಚಾರ ಮಾಡಲು ಕೋರಿ 05 ಪ್ರತಿಗಳೊಂದಿಗೆ ಕಳುಹಿಸಲಾಗಿದೆ.
9. ನಿರ್ದೇಶಕರು, ಪ್ರಸಾರ ಭಾರತಿ ಕೇಂದ್ರ, ಯಾದವಗಿರಿ, ಮೈಸೂರು – ಈ ಅಧಿಸೂಚನೆಯ ಮುಖ್ಯಾಂಶಗಳನ್ನು ನಿಮ್ಮ ಚಾನಲ್ ಹಾಗೂ ಬಾನುಲಿ ಕೇಂದ್ರದಿಂದ ಕೆಲವು ಸಲ ವಿದ್ಯಾರ್ಥಿಗಳಿಗೆ ಅನುಕೂಲವಾಗುವ ಹಾಗೆ ಭಿತ್ತರಿಸಲು ವಿಚಾರವನ್ನು ಮಾಡಲು ಕೋರಿದೆ.
10. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಪಾಲನಾ, ಮಾನಸಗಂಗೋತ್ರಿ, ಮೈಸೂರು 570 006
11. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಮಂಡಳಿ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
12. ಉಪಕುಲಸಚಿವರು (ಶೈಕ್ಷಣಿಕ) ಆಡಳಿತ ಶಾಖೆ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
13. ಎಲ್ಲಾ ಉಪಕುಲಸಚಿವರು/ಸಹಾಯಕ ಕುಲಸಚಿವರು (ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ,ಮೈಸೂರು 570 005.
14. ಡಾ.ಎಂ.ಎಸ್.ನರಸಿಂಹ ಮೂರ್ತಿ, ಸಂಖ್ಯಾಶಾಸ್ತ್ರಜ್ಞರು, ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
15. ಮುಖ್ಯಸ್ಥರು, ಮೆಟಾ-ಬ ಟೆಕ್ನಾಲಜೀಸ್, ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
16. ಪರೀಕ್ಷಾ ವಿಭಾಗದ ಎಲ್ಲಾ ಅಧೀಕ್ಷಕರು, ಪರೀಕ್ಷಾ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
17. ಎಲ್ಲಾ ಕಾರ್ಯನಿರ್ವಾಹಕರು (ಸಾಮಾನ್ಯ ವಿಭಾಗ ಮತ್ತು ಸ್ನಾತಕಪದವಿ ವಿಭಾಗ) ಪರೀಕ್ಷಾ ವಿಭಾಗ, ಮೈಸೂರು ವಿ.ವಿ, ಮೈಸೂರು
18. ಆಪ್ತ ಸಹಾಯಕರು, ಕುಲಪತಿಗಳ/ಕುಲಸಚಿವರ/ಕುಲಸಚಿವರ(ಪರೀಕ್ಷಾಂಗ)/ಹಣಕಾಸು ಅಧಿಕಾರಿಗಳು, ಮೈಸೂರು ವಿ.ವಿ, ಮೈಸೂರು.
19. ಕಛೇರಿ ಪ್ರತಿ.